8

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ತು ಸಭಾಪತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 8/2/2021

# ಸಭಾಪತಿ ಸ್ಥಾನ, ಕಾಂಗ್ರೆಸಿನಿಂದ ನಜೀರ್

■ **ವಿಕ ಸುದ್ದಿಲೋಕ** ಬೆಂಗಳೂರು 8/2/21

ಪರಿಷತ್ ಸಭಾಪತಿ ಚುನಾವಣೆಗೆ ಬಿಜೆಪಿ-ಜೆಡಿಎಸ್ ಮೈತ್ರಿ ಅಭ್ಯರ್ಥಿ ಬಸವರಾಜ ಹೊರಟ್ಟಿ ವಿರುದ್ಧ ಕಾಂಗ್ರೆಸ್‌ನಿಂದ ನಜೀರ್ ಅಹ್ಮದ್ ಅವರನ್ನು ಕಣಕ್ಕಿಳಿಸಲು ನಿರ್ಧರಿಸಲಾಗಿದೆ.

ಸಭಾಪತಿ ಚುನಾವಣೆಗೆ ಸ್ಪರ್ಧಿಸುವವರು ಸೋಮವಾರ ಮಧ್ಯಾಹ್ನ 12 ಗಂಟೆಯೊಳಗೆ ನಾಮಪತ್ರ ಸಲ್ಲಿಸಬಹುದಾಗಿದೆ. ಉಪ ಸಭಾಪತಿ ಚುನಾವಣೆ ಸಂದರ್ಭದಲ್ಲಿ ಬಿಜೆಪಿ, ಜೆಡಿಎಸ್ ನಡುವೆ ಮೈತ್ರಿಯಾಗಿದೆ. ಅದರಂತೆ ಬಿಜೆಪಿಯ ಎಂ.ಕೆ.ಪ್ರಾಣೇಶ್ ಉಪ ಸಭಾಪತಿಯಾಗಿ ಆಯ್ಕೆಯಾಗಿದ್ದಾರೆ. ಸಭಾಪತಿ ಸ್ಥಾನದ ಸಂಬಂಧವೂ ಈ ಹೊಂದಾಣಿಕೆ ಮುಂದುವರಿಯಲಿದೆ. ಬಿಜೆಪಿಯ ಬೆಂಬಲದೊಂದಿಗೆ ಹೊರಟ್ಟಿ ನಾಮಪತ್ರ ಸಲ್ಲಿಸಲಿದ್ದಾರೆ.

ಪ್ರಧಾನ ಪ್ರತಿಪಕ್ಷವಾಗಿ ಪೈಪೋಟಿ ನೀಡಬೇಕು ಎಂಬ ಉದ್ದೇಶದಿಂದ ಕಾಂಗ್ರೆಸ್ ಸಹ ಕಣಕ್ಕಿಳಿಯಲಿದೆ. ಈ ಸಂಬಂಧ ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ನಿವಾಸದಲ್ಲಿ ಭಾನುವಾರ ಸಂಜೆ ಸಭೆ ನಡೆಸಿದ ಕಾಂಗ್ರೆಸ್ ಪ್ರಮುಖರು ಸಮಾಲೋಚಿಸಿದರು. ಬಳಿಕ ನಜೀರ್ ಅಹ್ಮದ್ ಅವರಿಗೆ ನಾಮಪತ್ರ ಸಲ್ಲಿಸಲು ಸೂಚಿಸಲಾಗಿದೆ ಎಂದು ಮೂಲಗಳು ಖಚಿತ ಪಡಿಸಿವೆ.

ಸಭಾಪತಿ ಆಯ್ಕೆ ಸಂಬಂಧ ಮಂಗಳವಾರ ಚುನಾವಣೆ ನಡೆಯಲಿದೆ. ಪರಿಷತ್ ಕಲಾಪ ಬುಧವಾರದ ವರೆಗೂ ನಡೆಯಲಿದೆ.

> ● ಸಭಾಪತಿ ಸ್ಥಾನದ ವಿಚಾರವಾಗಿ ಮಾತ್ರ ಬಿಜೆಪಿ ಜತೆ ಮೈತ್ರಿಯಾಗಿದ್ದೇವೆ. ಅದನ್ನ ಬಿಟ್ಟು ಬೇರೆ ರೀತಿ ಹೊಂದಾಣಿಕೆ ಇಲ್ಲ.
> **-ಎಚ್.ಡಿ.ಕುಮಾರಸ್ವಾಮಿ** ಮಾಜಿ ಸಿಎಂ

